ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ತಾಯಿಯ ಮಡಿಲಿನಿಂದ, ತೊಟ್ಟಿಲವರೆಗೆ ಯೋಜನೆ ಕುರಿತು

ಶ್ರೀ ಕೆ. ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು) -

38 (27) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳ ವತಿಯಿಂದ ತಾಯಿಯ ಮಡಿಲಿನಿಂದ-ತೊಟ್ಟಿಲವರೆಗೆ ಎಂಬ ತಾಯಿ-ಮಗು ಹಾರೈಕೆಯ ಯೋಜನೆಗಳು ಯಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ 3 ವರ್ಷಗಳಿಂದ ಈ ಯೋಜನೆಗಳನ್ನು ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ದೊರೆತಿರುವ ಅನುದಾನವೆಷ್ಟು; ಈ ಅನುದಾನವನ್ನು ಯಾವ ರೀತಿಯಲ್ಲಿ ಸದುಪಯೋಗ ಮಾಡಿಕೊಳ್ಳಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಇತ್ತೀಚಿನ ಕೋವಿಡ್-19 ಪಿಡುಗು ಹರಡುವಿಕೆಯಿಂದ Immunization, Nutrition ಮತ್ತು Health ಯೋಜನೆಗಳ ಅನುಷ್ಠಾನ ನೆನೆಗುದಿಗೆ ಬಿದ್ದು, ತಾಯಿ-ಮಗು ಹಾರೈಕೆ ಕ್ರಮಗಳಿಗೆ ಹಿನ್ನಡೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕಾರ್ಯಕ್ರಮಗಳನ್ನು ಸಕಾಲಿಕವಾಗಿ ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು? (ವಿವರ ನೀಡುವುದು)